ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಮುಖ್ಯಮಂತ್ರಿ C.M.

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE: 5/11/20

# ಬಿಎಸ್‌ವೈ ಅಕ್ರಮ ಆಸ್ತಿ ಪ್ರಕರಣ ವಾಪಸ್

5/11/20

- ಮುಖ್ಯಮಂತ್ರಿಗೆ ಈಗ ನಿರಾಳ
- ಅರ್ಜಿದಾರ ವಕೀಲನಿಂದ ಮನವಿ
- ಮೂರು ಪ್ರಕರಣಗಳ ವಾಪಸ್

ಸಂ.ಕ. ಸಮಾಚಾರ ಬೆಂಗಳೂರು

ಅಕ್ರಮ ಆಸ್ತಿಗಳಿಕೆ ಪ್ರಕರಣದಲ್ಲಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪಗೆ ನೆಮ್ಮದಿ ಸಿಕ್ಕಿದ್ದು, ಅವರ ವಿರುದ್ಧ ದಾಖಲಾಗಿದ್ದ ಮೂರು ಪ್ರಕರಣಗಳನ್ನು ವಾಪಸ್ ಪಡೆಯಲಾಗಿದೆ.

ಶಿವಮೊಗ್ಗ ಮೂಲದ ವಕೀಲ ಬಿ. ವಿನೋದ್ ಯಡಿಯೂರಪ್ಪ ಮತ್ತು ಅವರ ಕುಟುಂಬ ಸದಸ್ಯರ ವಿರುದ್ಧ ಪ್ರಕರಣಗಳನ್ನು ದಾಖಲು ಮಾಡಿದ್ದರು. ಬುಧವಾರ ಅರ್ಜಿಯ ವಿಚಾರಣೆ ಕರ್ನಾಟಕ ಹೈಕೋರ್ಟ್‌ನಲ್ಲಿ ನಡೆಯು ಬೇಕಿತ್ತು. ಆದರೆ,ನ್ಯಾಯಮೂರ್ತಿ ಜಾನ್ ಮೈಕಲ್ ಕುನ್ಹಾ ಅವರಿದ್ದ ಪೀಠದ ಮುಂದೆ ಮನವಿ ಸಲ್ಲಿಸಿದ ವಕೀಲ ವಿನೋದ್ ಅವರು ಮೂರು ಪ್ರಕರಣಗಳನ್ನು ವಾಪಸ್ ಪಡೆಯುವುದಾಗಿ ಹೇಳಿದರು. ನ್ಯಾಯಾಲಯ ಸಹ ಇದಕ್ಕೆ ಒಪ್ಪಿಗೆ ನೀಡಿತು.



ಯಡಿಯೂರಪ್ಪ ಅವರು ಹಿಂದೆ ಮುಖ್ಯ ಮಂತ್ರಿಯಾಗಿದ್ದಾಗ ಹುಣಸೇಕಟ್ಟೆ, ಕೋಟೆ ಗಂಗೂರು ಮತ್ತು ಕೆಹೆಚ್‌ಬಿ ಕಾಲೋನಿಗಳಲ್ಲಿ ಅಧಿಕಾರ ದುರುಪಯೋಗ ಮಾಡಿಕೊಂಡು ಅಕ್ರಮವಾಗಿ ಆಸ್ತಿ ಸಂಪಾದನೆ ಮಾಡಿ ದ್ದಾರೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿತ್ತು.

ವಕೀಲ ವಿನೋದ್ ಸಚಿವ ಕೆ. ಎಸ್. ಈಶ್ವರಪ್ಪ ಮತ್ತು ಅವರ ಕುಟುಂಬ ಸದಸ್ಯರ ವಿರುದ್ಧ ಸಹ ಅಕ್ರಮ ಆಸ್ತಿಗಳಿಕೆ ಪ್ರಕರಣ ದಾಖಲು ಮಾಡಿದ್ದರು. ಆದರೆ ಅದನ್ನು ವಾಪಸ್ ಪಡೆದಿಲ್ಲ. ಹೈಕೋರ್ಟ್‌ನಲ್ಲಿ ವಿಚಾರಣೆ ಮುಂದುವರೆಯಲಿದೆ.